# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : **359 (465)**
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 10.07.2023
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಅರ್ಹತಾ ಪರೀಕ್ಷೆ ಇಲ್ಲದೆ ಶೇಕಡ 40% ರಷ್ಟು ಬಡ್ತಿ ಮೂಲಕ ಭರ್ತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ.<br>ಆದರೆ, ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಪದವಿ ಪಡೆದು ಕಾರ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಶಾಲಾ ಶಿಕ್ಷಕರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಇರುವ ಅವಕಾಶಗಳಂತೆ ಪ್ರೌಢಶಾಲೆ ಗ್ರೇಡ್-2 ಹುದ್ದೆಗೆ ಬಡ್ತಿ ನೀಡುವ ಬಗ್ಗೆ ಹಾಗೂ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರು (6ರಿಂದ8) ವೃಂದದಿಂದ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್-2 ಹುದ್ದೆಗೆ ಬಡ್ತಿ ನೀಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |
| ಆ) | ಪ್ರೌಢಶಾಲೆಯ ಸಹ ಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ಹುದ್ದೆಗೆ ಅರ್ಹತಾ ಪರೀಕ್ಷೆ ನಡೆಸಿ, ಶೇಕಡ 25% ರಷ್ಟು ಬಡ್ತಿ ಮೂಲಕ ತುಂಬುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಪ್ರೌಢಶಾಲೆಯ ಸಹ ಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ಹುದ್ದೆಗೆ ಅರ್ಹತಾ ಪರೀಕ್ಷೆ ನಡೆಸಿ, ಶೇಕಡ 25% ರಷ್ಟು ಬಡ್ತಿ ಮೂಲಕ ತುಂಬಲು ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು 2014ರಲ್ಲಿ ಜಾರಿಗೊಳಿಸಲಾಗಿರುತ್ತದೆ. |
| ಇ) | ಶಿಕ್ಷಕರಿಗೆ ಬಡ್ತಿ ನೀಡುವಲ್ಲಿ ಅರ್ಹತಾ ಪರೀಕ್ಷೆ ಮತ್ತು ಶೇಕಡವಾರು ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಈ ಮೇಲಿನ (ಅ) ಉತ್ತರದಿಂದ ಉದ್ಭವಿಸುವುದಿಲ್ಲ. |
| ಈ) | ಹೌದಾದಲ್ಲಿ, ಯಾವ ಕಾಲಮಿತಿಯಲ್ಲಿ ಇದನ್ನು ಸರಿದೂಗಿಸಲಾಗುವುದು? | |

ಸಂಖ್ಯೆ:ಇಪಿ 79 ಎಲ್‌ಬಿಪಿ 2023

(ಎಸ್. ಮಧು ಬಂಗಾರಪ್ಪ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು